# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೆಂಟನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಸೋಮವಾರ, ದಿನಾಂಕ:26ನೇ ಡಿಸೆಂಬರ್, 2022**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

### 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಆರನೆಯ ಪಟ್ಟಿ

### 02. ವಿತ್ತೀಯ ಕಾರ್ಯಕಲಾಪಗಳು

**ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:-**

ಅ) 2022-23ನೇ ಸಾಲಿನ ಪೂರಕ ಅಂದಾಜುಗಳ 2ನೇ ಕಂತಿನ ಬೇಡಿಕೆಗಳನ್ನು ಮಂಡಿಸುವುದು.

ಆ) 2022-23ನೇ ಸಾಲಿನ ಮಧ್ಯ ವಾರ್ಷಿಕ ಪರಿಶೀಲನಾ ವರದಿಯನ್ನು ಮಂಡಿಸುವುದು.

### 03. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:-**

ಅ) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾ ಲೆಕ್ಕಪರಿಶೋಧಕರು ನೀಡಿರುವ 2021-2022ನೇ ಸಾಲಿನ ಧನವಿನಿಯೋಗ ಲೆಕ್ಕಗಳು ಮತ್ತು ಹಣಕಾಸು ಲೆಕ್ಕಗಳನ್ನು (ಸಂಪುಟ I ಮತ್ತು II) ಸಭೆಯ ಮುಂದಿಡುವುದು.

**ಆ) ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು.**

01. ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2022

02. ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕ, 2022

## 04. ಅರ್ಜಿಗಳನ್ನೊಪ್ಪಿಸುವುದು

**ಶ್ರೀ ಶಶೀಲ್ ಜಿ. ನಮೋಶಿ ಅವರು ಈ ಕೆಳಕಂಡ ಅರ್ಜಿಗಳನ್ನೊಪ್ಪಿಸುವುದು:–**

01. 2014–15ನೇ ಸಾಲಿನಲ್ಲಿ ಬೀದಿ ಬದಿ ವ್ಯಾಪಾರಿಗಳ ಸೌಲಭ್ಯಕ್ಕಾಗಿ ಕಲಬುರಗಿ ಮಹಾನಗರ ಪಾಲಿಕೆಯಿಂದ ಮೀಸಲಿಟ್ಟ 50 ಲಕ್ಷ ರೂಪಾಯಿಗಳನ್ನು ವೆಚ್ಚ ಮಾಡದೆ ಹಿಂದಕ್ಕೆ ಪಡೆದಿರುವುದರಿಂದ ಬೀದಿ ಬದಿ ವ್ಯಾಪಾರಿಗಳು ಸರ್ಕಾರದಿಂದ ಸಿಗುವ ಸೌಲಭ್ಯದಿಂದ ವಂಚಿತರಾಗಿರುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

02. ಕಲಬುರಗಿ ನಗರದಲ್ಲಿ ಕಸ ವಿಲೇವಾರಿಗಾಗಿ ಸ್ವಾಧೀನ ಪಡಿಸಿಕೊಂಡಿರುವ ಜಮೀನಿನಲ್ಲಿ ಅಕ್ರಮವಾಗಿ ಫ್ಲಾಟ್‌ಗಳನ್ನು ನಿರ್ಮಿಸಿ ಅವುಗಳನ್ನು ಕಲಬುರಗಿ ಮಹಾನಗರ ಪಾಲಿಕೆಯ ಸಿಬ್ಬಂದಿಗಳಿಗೆ ಹಂಚಿಕೆ ಮಾಡಿರುವ ಬಗ್ಗೆ ಅರ್ಜಿಯನ್ನು ಒಪ್ಪಿಸುವುದು.

## 05. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

01 ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ, 2022

**ಶ್ರೀ ವಿ. ಸುನಿಲ್ ಕುಮಾರ್ (ಮಾನ್ಯ ಇಂಧನ, ಕನ್ನಡ ಮತ್ತು ಸಂಸ್ಕೃತಿ ಸಚಿವರು) ಅವರು:–**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರ (ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕ, 2022

**ಶ್ರೀ ಆರ್.ಅಶೋಕ (ಮಾನ್ಯ ಕಂದಾಯ ಸಚಿವರು)** ಅವರು:–

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಕರ್ನಾಟಕ ಭೂ ಕಂದಾಯ (ಎರಡನೇ ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 06. ಗಮನ ಸೆಳೆಯುವ ಸೂಚನೆಗಳು

01. **ಶ್ರೀಯುತರುಗಳಾದ ಎಸ್.ಎಲ್. ಭೋಜೇಗೌಡ, ಶರವಣ ಟಿ.ಎ. ಮತ್ತು ಕೆ.ಎ.ತಿಪ್ಪೇಸ್ವಾಮಿ** ಅವರುಗಳು ಬೆಂಗಳೂರು, ಬೆಂಗಳೂರು ಗ್ರಾಮಾಂತರ ಹಾಗೂ ರಾಮನಗರ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಸಂಬಂಧಿಸಿದ ಪ್ರಧಾನ ವ್ಯವಸ್ಥಾಪಕರು ಅಕ್ರಮ ಎಸಗಿರುವ ಕುರಿತು ಮಾನ್ಯ ಪಶುಸಂಗೋಪನೆ ಸಚಿವರ ಗಮನ ಸೆಳೆಯುವುದು.

02. **ಶ್ರೀ ಅರುಣ್ ಡಿ.ಎಸ್**. ಅವರು 1975ನೇ ಇಸವಿಯ ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಕರ್ನಾಟಕದಲ್ಲಿ ಸೆರೆಮನೆವಾಸ ಅನುಭವಿಸಿದವರಿಗೆ ವಿವಿಧ ರಾಜ್ಯಗಳಲ್ಲಿ ನೀಡುತ್ತಿರುವಂತೆ ಪಿಂಚಣಿ ಅಥವಾ ಗೌರವಧನವನ್ನು ನೀಡುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

03. **ಶ್ರೀಮತಿ ಹೇಮಲತಾ ನಾಯಕ** ಅವರು ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಕಾಯ್ದೆ 1987ರ ಪ್ರಕಾರ ಕೊಪ್ಪಳ ನಗರ ವ್ಯಾಪ್ತಿಯಲ್ಲಿರುವ ಲೇಔಟ್‌ಗಳಿಗೆ ಫಾರಂ ನಂ.03ನ್ನು ಸಾರ್ವಜನಿಕರಿಗೆ ವಿತರಿಸದೆ ಇರುವ ಕುರಿತು ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರ ಗಮನ ಸೆಳೆಯುವುದು.

3..

04. **ಶ್ರೀಯುತರುಗಳಾದ ಶಶೀಲ್ ಜಿ. ನಮೋಶಿ, ಡಾ. ಚಂದ್ರಶೇಖರ್ ಬ. ಪಾಟೀಲ್ ಮತ್ತು ಡಾ.ತಳವಾರ್ ಸಾಬಣ್ಣ** ಅವರುಗಳು ಕಲಬುರಗಿ ಹಾಗೂ ಯಾದಗಿರಿ ಜಿಲ್ಲೆಗಳಲ್ಲಿ ಜಾತಿ ಸಿಂಧುತ್ವ ಪ್ರಮಾಣ ಪತ್ರ ಸಿಗದೆ ಹಲವು ವರ್ಷಗಳಿಂದ ವಿವಿಧ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳು ಅತಂತ್ರರಾಗಿರುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

05. **ಶ್ರೀ ಎಸ್. ರವಿ** ಅವರು ಗ್ರಾಮಪಂಚಾಯಿತಿಗಳನ್ನು ಆರ್ಥಿಕವಾಗಿ ಸದೃಢಗೊಳಿಸಿ ಪರಿಪೂರ್ಣ ಸ್ಥಳೀಯ ಸ್ವಯಂ ಸರ್ಕಾರಗಳಾಗಿ ಕಾರ್ಯನಿರ್ವಹಿಸಲು ನಿಯಮಗಳನ್ನು ರೂಪಿಸುವ ಕುರಿತು ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

## 07. ನಿಯಮ 330ರ ಮೇರೆಗೆ

೦1. **ಶ್ರೀ ಮರಿತಿಬ್ಬೇಗೌಡ** ಅವರು ಕ್ರೈಸ್ ವತಿಯಿಂದ ನಡೆಸಲಾಗುತ್ತಿರುವ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಶಿಕ್ಷಕರಿಗೆ ಮೂಲ ಸೌಲಭ್ಯಗಳನ್ನು ಮಂಜೂರು ಮಾಡದಿರುವುದು ಹಾಗೂ ವಸತಿ ಶಾಲೆಯಲ್ಲಿನ ವಿದ್ಯಾರ್ಥಿಗಳು ಮೂಲಭೂತ ಸೌಕರ್ಯಗಳಿಂದ ವಂಚಿತರಾಗಿರುವ ಕುರಿತು ಪ್ರಸ್ತಾಪಿಸುವುದು.

೦2. **ಶ್ರೀ ಯು.ಬಿ.ವೆಂಕಟೇಶ್ ಹಾಗೂ ಶ್ರೀ ಮುನಿರಾಜು ಗೌಡ ಪಿ.ಎಂ. ಅವರುಗಳು** ಶ್ರೀ ಗುರುರಾಘವೇಂದ್ರ ಸಹಕಾರ ಬ್ಯಾಂಕ್‌ನಲ್ಲಿ ನಡೆದಿರುವ ಅವ್ಯವಹಾರದಲ್ಲಿ ಭಾಗಿಯಾಗಿರುವವರ ವಿರುದ್ಧ ಈವರೆವಿಗೂ ಕ್ರಮ ಕೈಗೊಳ್ಳದಿರುವ ಹಾಗೂ ಹಣ ಹೂಡಿಕೆ ಮಾಡಿ ವಂಚಿತರಾದವರಿಗೆ ಪರಿಹಾರ ಒದಗಿಸದಿರುವ ಕುರಿತು ಪ್ರಸ್ತಾಪಿಸುವುದು.

## 08. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಚರ್ಚೆ

1. **ಶ್ರೀಯುತರುಗಳಾದ;–**

| | | |
|---|---|---|
| | ಬಿ.ಕೆ.ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು, ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಸಲೀಂ ಅಹಮದ್, ಕೆ.ಎ.ತಿಪ್ಪೇಸ್ವಾಮಿ, ಶರವಣ ಟಿ.ಎ. ಹಾಗೂ ಇತರರು. | ಕರ್ನಾಟಕ– ಮಹಾರಾಷ್ಟ್ರ ಗಡಿ ವಿವಾದವನ್ನು ಶಾಶ್ವತವಾಗಿ ಪರಿಹರಿಸುವಲ್ಲಿ ಸರ್ಕಾರವು ವಿಫಲವಾಗಿರುವ ಕುರಿತು. |
| 2. | ಕೆ.ಎ. ತಿಪ್ಪೇಸ್ವಾಮಿ, ಶರವಣ ಟಿ.ಎ., ಸಿ.ಎನ್. ಮಂಜೇಗೌಡ ಮತ್ತು ಸೂರಜ್ ರೇವಣ್ಣ ಅವರುಗಳು | ಬೆಂಗಳೂರು ಮಹಾನಗರ ಪಾಲಿಕೆವತಿಯಿಂದ ಬೆಂಗಳೂರು ವಿಧಾನ ಸಭಾ ಕ್ಷೇತ್ರದ ಮತದಾರರಲ್ಲಿ ಮತದಾನದ ಬಗ್ಗೆ ಜಾಗೃತಿ ಮತ್ತು ಅರಿವು ಮೂಡಿಸಲು ನೇಮಿಸಲಾಗಿದ್ದ "ಚಿಲುಮೆ" ಖಾಸಗಿ ಸಂಸ್ಥೆಯು ಮತದಾರರ ಮಾಹಿತಿಗಳನ್ನು ಕಲೆಹಾಕುವ ಮೂಲಕ ಅಕ್ರಮವೆಸಗಿರುವ ಕುರಿತು. |

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---